# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 525

ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 16.12.2021

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| (ಅ) ಅರೆ ಸೇನಾ ಪಡೆಯ ನಿವೃತ್ತ ಸೈನಿಕರಿಗೆ ರಾಜ್ಯ ಸರ್ಕಾರದಲ್ಲಿ 2018 ರವರೆಗೆ ಇದ್ದ ನೌಕರಿ ಅವಕಾಶವನ್ನು ಹಿಂಪಡೆಯಲು ಕಾರಣವೇನು; | ಅರೆ ಸೇನಾ ಪಡೆಯ ನಿವೃತ್ತ ಸೈನಿಕರಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಲ್ಲಿ ಮಾಡುವ ನೇರ ನೇಮಕಾತಿಗಳಲ್ಲಿ ಇದುವರೆವಿಗೂ ಯಾವುದೇ ನೌಕರಿ ಅವಕಾಶವನ್ನು ಒದಗಿಸಿರುವುದಿಲ್ಲವಾದ್ದರಿಂದ ಈ ಅವಕಾಶವನ್ನು ಹಿಂಪಡೆದಿರುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. |
| (ಆ)2012ರಲ್ಲಿ ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೂ ನೌಕರಿಗೆ ಅವಕಾಶ ನೀಡುವಂತೆ ಆದೇಶ ನೀಡಿದ್ದರೂ, ರಾಜ್ಯದಲ್ಲಿ ನಿರಾಕರಿಸಲಾಗಿರುವುದಕ್ಕೆ ಕಾರಣವೇನು? | ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಮಾಜಿ ಸೈನಿಕರಿಗೆ ಶೇಕಡ 10ರಷ್ಟು ಸಮತಳ ಮೀಸಲಾತಿಯನ್ನು ಒದಗಿಸಲಾಗಿದೆ. ಅರೆ ಸೇನಾ ಪಡೆಗಳಲ್ಲಿ ಸೇವೆ ಸಲ್ಲಿಸುವ ಸೈನಿಕರುಗಳಿಗೆ 60 ವಯಸ್ಸಿನವರೆಗೆ ಸೇವೆ ಸಲ್ಲಿಸಬಹುದಾದ ಅವಕಾಶವಿರುವುದರಿಂದ ಸದರಿ ಮೀಸಲಾತಿಯನ್ನು ಮಾಜಿ ಸೈನಿಕರಿಗೆ ಮಾತ್ರ ಕಲ್ಪಿಸಲಾಗಿದೆ. |

ಸಂಖ್ಯೆ: ಸಿಆಸುಇ 204 ಸೇನೆನಿ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ